**All India Radio: Bangalore**
**Regional Bulletin In Kannada**
**15.11.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.11.2025 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಳಗಾವಿ ಕಿರು ಮೃಗಾಲಯದಲ್ಲಿ ೨೮ ಕೃಷ್ಣ ಮೃಗಗಳ ಸಾವು - ಅರಣ್ಯ ಇಲಾಖೆ ಅಧಿಕಾರಿಗಳಿಂದ ಪರಿಶೀಲನೆ
2. ರೈಲುಗಳ ಅಪಘಾತ ತಡೆಯಲು ನೈಋತ್ಯ ರೈಲ್ವೆಯಿಂದ ಎರಡು ಹಂತದಲ್ಲಿ ಕವಚ್ ತಂತ್ರಜ್ಞಾನ ಅಳವಡಿಕೆ
3. ಬಿಜೆಪಿಯಿಂದ 'ಸ್ಯಾಂಕಿ ಕೆರೆ ಉಳಿಸಿ ಬೆಂಗಳೂರು ರಕ್ಷಿಸಿ' ಅಭಿಯಾನ
4. ಬೆಂಗಳೂರಿನ ಜ್ಞಾನಭಾರತಿ ಕಲಾಗ್ರಾಮದಲ್ಲಿ ಸಾಲು ಮರದ ತಿಮ್ಮಕ್ಕ ಅವರ ಅಂತ್ಯಕ್ರಿಯೆ
5. ದಕ್ಷಿಣಕನ್ನಡ ಜಿಲ್ಲೆಯಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತದಲ್ಲಿ ೬ ಮಂದಿ ಸಾವು

<><><><>

ಬೆಳಗಾವಿ ಕಿತ್ತೂರು ರಾಣಿ ಚೆನ್ನಮ್ಮ ಕಿರು ಮೃಗಾಲಯದಲ್ಲಿದ್ದ ೨೮ ಕೃಷ್ಣಮೃಗಗಳು ಸಾವನ್ನಪ್ಪಿವೆ. ನವೆಂಬರ್ ೧೩ ರಂದು ೮, ಇಂದು ಮತ್ತೆ ೨೦ ಕೃಷ್ಣಮೃಗಳು ಸಾವನ್ನಪ್ಪಿವೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಹಿರಿಯ ಅರಣ್ಯ ಅಧಿಕಾರಿಗಳು ದೌಡಾಯಿಸಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ. ಬ್ಯಾಕ್ಟಿರಿಯಲ್ ಸೋಂಕಿನಿಂದ ಕೃಷ್ಣಮೃಗಗಳು ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದ್ದು, ಬೆಂಗಳೂರಿನ ಬನ್ನೇರುಘಟ್ಟದ ಪಶು ವಿಜ್ಞಾನ ಸಂಸ್ಥೆಯ ತಜ್ಞ ವೈದ್ಯರು ಆಗಮಿಸಿ ಪರೀಕ್ಷೆ ನಡೆಸಲಿದ್ದಾರೆ. ನವೆಂಬರ್ ೧೩ ರಂದು ಸಾವನ್ನಪ್ಪಿದ್ದ ಕೃಷ್ಣ ಮೃಗಗಳ ಮರಣೋತ್ತರ ಪರೀಕ್ಷೆ ನಡೆಸಿ ಸ್ಯಾಂಪಲ್‌ಅನ್ನು ಮೈಸೂರಿನ ಪ್ರಯೋಗಾಲಯಕ್ಕೆ ರವಾನಿಸಲಾಗಿತ್ತು. ವರದಿ ಬರುವ ಮುನ್ನವೇ ೨೦ ಕೃಷ್ಣ ಮೃಗಗಳು ಸಾವನ್ನಪ್ಪಿವೆ. ಘಟನೆ ಕುರಿತಂತೆ ತನಿಖೆಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಆದೇಶ ನೀಡಿದ್ದಾರೆ.

<><><><>

ದೇಶಾದ್ಯಂತ ರೈಲುಗಳ ಅಪಘಾತ ತಡೆಯಲು ರೈಲ್ವೆ ಇಲಾಖೆ ಕವಚ್ ತಂತ್ರಜ್ಞಾನ ಅಳವಡಿಕೆಗೆ ಮುಂದಾಗಿದೆ. ನೈಋತ್ಯ ರೈಲ್ವೆಯು 'ಕವಚ್' ಎಂಬ ತಂತ್ರಜ್ಞಾನವನ್ನು ಎರಡು ಹಂತದಲ್ಲಿ ಆಳವಡಿಸಿಕೊಳ್ಳಲು ನಿರ್ಧರಿಸಿದೆ. ಈ ನಿಟ್ಟಿನಲ್ಲಿ ಹಲವು ಕಡೆ ಸಮೀಕ್ಷೆ ಪೂರ್ಣಗೊಳಿಸಿದ್ದು, ಕೆಲವೆಡೆ ಸಮೀಕ್ಷೆ ಮುಂದುವರಿದಿದೆ ಎಂದು ನೈಋತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ ಕನಮಡಿ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ನೈಋತ್ಯ ರೈಲ್ವೆಯ ಹುಬ್ಬಳ್ಳಿ, ಬೆಂಗಳೂರು ಮೈಸೂರು ವಿಭಾಗದ ಒಟ್ಟು ೩ ಸಾವಿರದ ೬೯೨ ಕಿಲೊ ಮೀಟರ್ ವ್ಯಾಪ್ತಿಯಲ್ಲಿ ಮೊದಲ ಹಂತದಲ್ಲಿ ೭೦೦ ಕೋಟಿ ವೆಚ್ಚದಲ್ಲಿ ೧ ಸಾವಿರದ ೫೬೮ ಕಿಲೋಮೀಟರ್ ಹಾಗೂ ಎರಡನೇ ಹಂತದಲ್ಲಿ ೧ ಸಾವಿರದ ೧೪೪.೬೫ ಕೋಟಿ ವೆಚ್ಚದಲ್ಲಿ ೨ ಸಾವಿರದ ೧೨೪ ಕಿಲೋಮೀಟರ್ ವ್ಯಾಪ್ತಿಯ ಮಾರ್ಗಗಳಲ್ಲಿ ಕವಚ್ ಅಳವಡಿಕೆಯಾಗಲಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ಸಮೀಕ್ಷೆ ಮುಗಿದ ೧ ಸಾವಿರದ ೫೬೮ ಕಿಲೋಮೀಟರ್ ಮಾರ್ಗದಲ್ಲಿ ಕವಚ್ ಅಳವಡಿಸಲು, ಪ್ರಾಜೆಕ್ಟ್ ಬೆಂಗಳೂರು ಹಾಗೂ ಪ್ರಾಜೆಕ್ಟ್ ಹುಬ್ಬಳ್ಳಿ ಹೆಸರಿನಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಕಾಮಗಾರಿ ಆದೇಶ ನೀಡಿದ ೧೮ ತಿಂಗಳಲ್ಲಿ ಕವಚ್ ತಂತ್ರಜ್ಞಾನ ಅಳವಡಿಕೆಯ ಕಾರ್ಯ ಪೂರ್ಣಗೊಳ್ಳಲಿದೆ.

<><><>

ಬಿಹಾರ ಚುನಾವಣೆಯ ಸೋಲನ್ನು ಒಪ್ಪಿಕೊಳ್ಳಲಾಗುವುದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ಹತ್ತಿರ ಬರುತ್ತಿದ್ದಂತೆ ಅಲ್ಲಿನ ಸರ್ಕಾರ ೭೫ ಲಕ್ಷ ಕುಟುಂಬಗಳಿಗೆ ಸರ್ಕಾರದ ಯೋಜನೆಗಳಡಿ ಆರ್ಥಿಕ ನೆರವು ನೀಡಿರುವುದರಿಂದ ಕಾಂಗ್ರೆಸ್‌ಗೆ ದೊಡ್ಡ ಹೊಡೆತ ನೀಡಿದೆ. ಚುನಾವಣಾ ಆಯೋಗ ಕೂಡ ಈ ನಿಟ್ಟಿನಲ್ಲ ಸೂಕ್ತ ಕ್ರಮ ಕೈಗೊಳ್ಳದಿರುವುದು ದುರಂತ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ 'ನವೆಂಬರ್ ಕ್ರಾಂತಿ' ಎಂಬುದಕ್ಕೆ ಯಾವುದೇ ಆಧಾರಗಳಿಲ್ಲ. ಮುಖ್ಯಮಂತ್ರಿಗಳು ದೆಹಲಿಗೆ ತೆರಳಿರುವುದು ಪೂರ್ವನಿಯೋಜಿತ ಎಂದು ಸ್ಪಷ್ಟಪಡಿಸಿದ್ದಾರೆ.

<><><>

'ಸ್ಯಾಂಕಿ ಕೆರೆ ಉಳಿಸಿ ಬೆಂಗಳೂರು ರಕ್ಷಿಸಿ' ಎಂದು ಬಿಜೆಪಿ ಬೆಂಗಳೂರಿನಲ್ಲಿ ಪ್ರತಿಭಟನೆ ಹಮ್ಮಿಕೊಂಡಿದೆ. ರಾಜ್ಯ ಸರ್ಕಾರ ಬೆಂಗಳೂರಿನ ಸುಂದರ ಪ್ರಕೃತಿಯನ್ನು ನಾಶಮಾಡಿ ಕೆರೆಗಳನ್ನು ಹಾಳು ಮಾಡುತ್ತಿದೆ. ಅವೈಜ್ಞಾನಿಕ ಮೇಲ್ಸೇತುವೆಗಳನ್ನು ನಿರ್ಮಿಸಲು ಸ್ಯಾಂಕಿ ಕೆರೆಯ

ನಾಶವಾಗುತ್ತಿದೆ ಎಂದು ಆರೋಪಿಸಿ ಬಿಜೆಪಿ ಸಹಿ ಸಂಗ್ರಹ ಅಭಿಯಾನ ಕೈಗೊಂಡಿದೆ. ಅಭಿಯಾನದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಬಿಜೆಪಿ ಪ್ರತಿಪಕ್ಷ ನಾಯಕ ಆರ್. ಅಶೋಕ, ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥ ನಾರಾಯಣ ಸೇರಿದಂತೆ ಹಲವರು ಭಾಗಿಯಾಗಿದ್ದರು.

<><><><>

ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕ ಅವರ ಅಂತ್ಯಕ್ರಿಯೆ ಬೆಂಗಳೂರಿನ ಜ್ಞಾನಭಾರತಿ ಬಳಿಯ ಕಲಾಗ್ರಾಮದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಿತು. ಇದಕ್ಕೂ ಮೊದಲು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಹಲವು ಗಣ್ಯರು ಅಂತಿಮ ದರ್ಶನ ಪಡೆದರು. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಪ್ರತಿಪಕ್ಷ ನಾಯಕ ಆರ್. ಅಶೋಕ ಸೇರಿದಂತೆ ಹಲವು ಗಣ್ಯರು ಅಂತಿಮ ನಮನ ಸಲ್ಲಿಸಿದರು. ಸಾಲುಮರದ ತಿಮ್ಮಕ್ಕ ಮಕ್ಕಳಿಲ್ಲದ ಕಾರಣಕ್ಕೆ ಸಸಿಗಳನ್ನೆ ಮಕ್ಕಳಂತೆ ಬೆಳೆಸಿ ಪರಿಸರ ಸಂರಕ್ಷಣೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು. ರಾಜ್ಯಾದ್ಯಂತ ಲ ಸಾವಿರಕ್ಕೂ ಹೆಚ್ಚು ಮರಗಳನ್ನು ಬೆಳೆಸಿದ್ದರು. ಇವರ ಈ ಅಪೂರ್ವ ಸೇವೆಗೆ ಪದ್ಮಶ್ರೀ ಸೇರಿದಂತೆ ಹಲವು ಪ್ರಶಸ್ತಿಗಳು ಒಲಿದು ಬಂದಿದ್ದವು.

<><><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂದು ಬೆಳಗ್ಗೆ ನಡೆದ ಎರಡು ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಒಟ್ಟು ಆರು ಮಂದಿ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಆರು ಮಂದಿ ಗಾಯಗೊಂಡಿದ್ದಾರೆ. ಮಂಗಳೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ಬಿ.ಸಿ.ರೋಡ್ ಬಳಿ ನಡೆದ ಅಪಘಾತದಲ್ಲಿ ಬೆಂಗಳೂರು ಮೂಲದ ಮೂರು ಮಂದಿ ಸಾವನ್ನಪ್ಪಿದ್ದಾರೆ. ಕಾರು ಚಾಲಕ ನಿಯಂತ್ರಣ ತಪ್ಪಿ ಬ್ರಹ್ಮಶ್ರೀ ನಾರಾಯಣ ಗುರು ವೃತ್ತಕ್ಕೆ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಅಪಘಾತದಲ್ಲಿ ಆರು ಮಂದಿ ಗಾಯಗೊಂಡಿದ್ದು, ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಇನ್ನೊಂದೆಡೆ ರಾಷ್ಟ್ರೀಯ ಹೆದ್ದಾರಿ ೬೬ರ ಪಣಂಬೂರು ಬಳಿ ನಡೆದ ಸರಣಿ ಅಪಘಾತದಲ್ಲಿ ಮೂರು ಮಂದಿ ಸಾವನ್ನಪ್ಪಿದ್ದಾರೆ. ಟ್ಯಾಂಕರ್ ಆಟೋ ರಿಕ್ಷಾ ಮತ್ತು ಕಾರು ನಡುವೆ ಈ ಅವಘಡ ಸಂಭವಿಸಿ ಸಾವು ಸಂಭವಿಸಿದೆ.

<><><><>

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ೬ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಬೃಹತ್ ಸಾಮೂಹಿಕ ಸ್ವಚ್ಛತಾ ಕಾರ್ಯದ ಸ್ಥಳಕ್ಕೆ ಆಯುಕ್ತ ರಾಜೇಂದ್ರ ಚೋಳನ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಪೌರ ಕಾರ್ಮಿಕರೊಂದಿಗೆ ಸಂವಾದ ನಡೆಸಿದ ಅವರು, ಅವರ ಕುಂದು-ಕೊರತೆ ಆಲಿಸಿದರು. ಪೌರ ಕಾರ್ಮಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅಧಿಕಾರಿಗಳಿಗೆ ಸೂಚಿಸಿದರು. ಇದೇ ವೇಳೆ ಗಾಂಧೀನಗರದಲ್ಲಿ ಟ್ರಾವೆಲ್ಸ್ ಸಂಸ್ಥೆಗಳಿಗೆ ದಂಡ ವಿಧಿಸಲು ಸೂಚಿಸಿದರು.

<><><>

ಬೆಂಗಳೂರಿನ ಇತಿಹಾಸ ಪ್ರಸಿದ್ಧ ಕಡಲೆಕಾಯಿ ಪರಿಷೆಗೆ ದಿನಗಣನೆ ಆರಂಭವಾಗಿದೆ. ಈ ನಡುವೆ ಬೆಂಗಳೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಂಯುಕ್ತಾಶ್ರಯದಲ್ಲಿ ಕಡಲೆಕಾಯಿ ಪರಿಷೆಯ ಪ್ರಯುಕ್ತ ಸರಸ್ ಮೇಳವನ್ನು ಇಂದಿನಿಂದ ಇದೇ ೧೯ ರವರೆಗೆ ಬೆಳಿಗ್ಗೆ ೯.೦೦ ಗಂಟೆಯಿಂದ ರಾತ್ರಿ ೯.೦೦ ಗಂಟೆಯವರೆಗೆ ಬಸವನಗುಡಿಯ ಶ್ರೀ ಕಾರಂಜಿ ಆಂಜನೇಯಸ್ವಾಮಿ ದೇವಸ್ಥಾನ ಆವರಣದಲ್ಲಿ ಆಯೋಜಿಸಲಾಗಿದೆ. ಈ ಮೇಳದಲ್ಲಿ ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ತಾಲ್ಲೂಕಿನ ನಗರ ಮತ್ತು ಗ್ರಾಮೀಣ ಪ್ರದೇಶದ ಸ್ವ-ಸಹಾಯ ಗುಂಪಿನ ಮಹಿಳಾ ಸದಸ್ಯರು ತಯಾರಿಸಿದ ವಿವಿಧ ಕರಕುಶಲ ವಸ್ತುಗಳು, ಆಹಾರ ಉತ್ಪನ್ನಗಳು, ಗೃಹ ಉಪಯೋಗಿ ವಸ್ತುಗಳ ಪ್ರದರ್ಶನ ಮತ್ತು ನೇರ ಮಾರಾಟ ನಡೆಯಲಿದೆ.

<><><>

ಉತ್ತರಕನ್ನಡ ಜಿಲ್ಲೆಯ ಕಾರವಾರ ತಾಲೂಕಿನ ಕೈಗಾದಲ್ಲಿ ಡಿಸೆಂಬರ್ ೧೧ ರಂದು ನಡೆಯುವ ಅಣಕು ಕಾರ್ಯಚರಣೆಯಲ್ಲಿ ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯದಿಂದ, ಯಾವುದೇ ಲೋಪಗಳಾಗದಂತೆ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚಿಸಿದ್ದಾರೆ.

<><><>

ಕಳೆದ ಎರಡು ದಶಕಗಳಲ್ಲಿ ಜಾಗತಿಕವಾಗಿ ೧ ಸಾವಿರದ ೬೦೦ಕ್ಕೂ ಹೆಚ್ಚು ಪತ್ರಕರ್ತರು ಹತ್ಯೆಯಾಗಿರುವುದು ನೋವಿನ ಸಂಗತಿ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಆತಂಕ ವ್ಯಕ್ತಪಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>